**Akashvani : Bangalore**
**Regional Bulletin In Kannada**
**18.05.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**18.05.2026 / 18.40 hrs**

---

ಮುಖ್ಯಾಂಶಗಳು

೧. ದುಬಾರೆಯಲ್ಲಿ ಸಾಕಾನೆಗಳ ಕಾದಾಟದ ವೇಳೆ ಮಹಿಳೆ ಸಾವು; ವನ್ಯಜೀವಿಗಳಿಂದ ನಿರ್ದಿಷ್ಟ ಅಂತರ ಕಾಯ್ದುಕೊಳ್ಳುವಂತೆ ಸಚಿವ ಈಶ್ವರ್ ಖಂಡ್ರೆ ಆದೇಶ

೨. ತುಮಕೂರಿನಲ್ಲಿ ನಾಳೆ ಸರ್ಕಾರದ ಸಾಧನಾ ಸಮಾವೇಶ; ೧ ಲಕ್ಷದ ೫೨ ಸಾವಿರ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ

೩. ನಾಲ್ಕು ಸಾವಿರದ ೫೦೦ ಕೋಟಿ ರೂಪಾಯಿ ವಂಚನೆ ಪ್ರಕರಣ; ಆರೋಪಿ ಶಿವಾನಂದ ನೀಲಣ್ಣವರ್ ೧೦ ದಿನ ಸಿಐಡಿ ವಶಕ್ಕೆ

೪. ಕೋಲಾರದಲ್ಲಿ ಕೃಷಿ ಹೊಂಡಗಳಿಗೆ ತಂತಿಬೇಲಿ ಅಳವಡಿಸುವಂತೆ ಜಿಲ್ಲಾಧಿಕಾರಿ ಎಂ.ಆರ್.ರವಿ ಆದೇಶ

೫. ಬೆಂಗಳೂರಿನಲ್ಲಿ ಸುರಿದ ಮಳೆಗೆ ಜನಜೀವನ ಅಸ್ತವ್ಯಸ್ಥ ; ರಾಜ್ಯದ ವಿವಿಧೆಡೆ ಇಂದು ಗುಡುಗು ಸಹಿತ ಮಳೆ; ಹವಾಮಾನ ಇಲಾಖೆ ಮುನ್ಸೂಚನೆ

---

ಕೊಡಗು ಜಿಲ್ಲೆಯ ದುಬಾರೆ ಸಾಕಾನೆ ಶಿಬಿರದಲ್ಲಿ ಎರಡು ಆನೆಗಳ ನಡುವಿನ ಕಾದಾಟದ ವೇಳೆ ಚೆನ್ನೈ ಮೂಲದ ಪ್ರವಾಸಿ ಮಹಿಳೆ ಸಾವನ್ನಪ್ಪಿದ್ದಾರೆ.

ದುಬಾರೆಯಲ್ಲಿ ಸಾಕಾನೆಗಳಿಗೆ ಸ್ನಾನ ಮಾಡಿಸುವ ಸಂದರ್ಭದಲ್ಲಿ ಎರಡು ಆನೆಗಳ ನಡುವೇ ಏಕಾಏಕಿ ಕಾದಾಟ ನಡೆದಿದೆ. ಈ ವೇಳೆ, ಆನೆಯೊಂದರ ಕೆಳಗಡೆ ಬಿದ್ದು ಗಂಭೀರ

ಗಾಯಗೊಂಡಿದ್ದ ಪ್ರವಾಸಿ ಮಹಿಳೆ ಜುನೆಸ್ವಿ, ಕುಶಾಲನಗರದ ಖಾಸಗಿ ಆಸ್ಪತ್ರೆಯಲ್ಲಿ ಸಾವನ್ನಪಿದ್ದಾರೆ.

ಘಟನೆ ಸಂಭವಿಸಿದ ಸಂದರ್ಭದಲ್ಲಿ ನೂರಾರು ಪ್ರವಾಸಿಗರು ಇದ್ದರು. ಈ ವೇಳೆ, ಆನೆಗಳು ಕಾದಾಟ ನೋಡಿ, ಬಹುತೇಕ ಪ್ರವಾಸಿಗರು ಓಡುವ ಮೂಲಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಘಟನೆ ಕುರಿತಂತೆ ಪ್ರತಿಕ್ರಿಯಿಸಿರುವ ಅರಣ್ಯ ಸಚಿವ ಈಶ್ವರ್ ಖಂಡ್ರೆ, ಪ್ರವಾಸಿಗರು ವನ್ಯಜೀವಿಗಳಿಂದ ನಿರ್ದಿಷ್ಟ ಅಂತರ ಕಾಯ್ದುಕೊಳ್ಳುವಂತೆ ಸೂಚಿಸಿದ್ದಾರೆ.

---

ಕಂದಾಯ ಇಲಾಖೆಯಲ್ಲಿ ತುಮಕೂರು ಜಿಲ್ಲೆ ಉತ್ತಮ ಸಾಧನೆ ಮಾಡುವ ಮೂಲಕ ಗಿನ್ನಿಸ್ ರೆಕಾರ್ಡ್ ಗೆ ಸೇರ್ಪಡೆಯಾಗಿದೆ. ಮಜರೆ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಿ, ೧ ಲಕ್ಷದ ೫೨ ಸಾವಿರ ಫಲಾನುಭವಿಗಳಿಗೆ ಹಕ್ಕುಪತ್ರ ನೀಡಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ತುಮಕೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಿನ್ನಿಸ್ ರೆಕಾರ್ಡ್‌ನ ಪದಾಧಿಕಾರಿಗಳು ನಾಳೆ ನಡೆಯಲಿರುವ ಕಾರ್ಯಕ್ರಮದಲ್ಲಿ ಪ್ರಮಾಣಪತ್ರವನ್ನು ನೀಡಲಿದ್ದಾರೆ ಎಂದು ಹೇಳಿದ್ದಾರೆ.

ನಾಳೆ ನಡೆಯಲಿರುವ ಸರ್ಕಾರದ 'ಸಾಧನಾ ಸಮಾವೇಶ' ಕಾರ್ಯಕ್ರಮದಲ್ಲಿ ಎರಡು ಲಕ್ಷಕ್ಕೂ ಅಧಿಕ ಮಂದಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ತಿಳಿಸಿದ್ದಾರೆ.

---

೪ ಸಾವಿರದ ೫೦೦ ಕೋಟಿ ರೂಪಾಯಿ ವಂಚನೆ ಆರೋಪ ಪ್ರಕರಣ ಸಂಬಂಧ ಬೆಳಗಾವಿಯ ಶಿವಂ ಅಸೋಸಿಯೇಟ್ಸ್ ಮಾಲೀಕ ಶಿವಾನಂದ ನೀಲಣ್ಣವರ್‌ನನ್ನು ೧೦ ದಿನಗಳ ಕಾಲ ಸಿಐಡಿ ಕಸ್ಟಡಿಗೆ ನೀಡಿ ಬೆಳಗಾವಿಯ ೨ನೇ ಹೆಚ್ಚುವರಿ ಸೆಷನ್ಸ್ ನ್ಯಾಯಾಲಯ ಆದೇಶಿಸಿದೆ.

ಬೆಂಗಳೂರಿನ ಕಚೇರಿಗೆ ಆರೋಪಿಯನ್ನು ಕರೆತರಲಾಗಿದ್ದು, ವಿಚಾರಣೆ ನಡೆಸಲು ನಿರ್ಧರಿಸಲಾಗಿದೆ.

ಶಿವಾನಂದ ನೀಲಣ್ಣವರ್ ಬಳಿ ೩೫ ಸಾವಿರ ಮಂದಿ ಹೂಡಿಕೆ ಮಾಡಿದ್ದು, ಒಂದು ಸಾವಿರ ಕೋಟಿಗೂ ಅಧಿಕ ಹಣದ ವ್ಯವಹಾರ ನಡೆದಿದೆ. ಹೀಗಾಗಿ ೧೦ ದಿನ ಕಸ್ಟಡಿಗೆ ನೀಡುವಂತೆ ಸಿಐಡಿ ಅಧಿಕಾರಿಗಳು ನ್ಯಾಯಾಲಯಕ್ಕೆ ಮನವಿ ಮಾಡಿದ್ದರು.

ಸಿಐಡಿ ವಕೀಲರ ಮನವಿ ಮೇರೆಗೆ ಆರೋಪಿಯನ್ನು ವಶಕ್ಕೆ ನೀಡಿ ೨ನೇ ಹೆಚ್ಚುವರಿ ಸೆಷನ್ಸ್ ಕೋರ್ಟ್ ನ್ಯಾಯಾಧೀಶರಾದ ಗಂಗಾಧರ ಅವರು ಆದೇಶ ನೀಡಿದ್ದಾರೆ.

---

ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕು ಟೇಕಲ್ ವ್ಯಾಪ್ತಿಯ ಕೊಂಡಶೆಟ್ಟಹಳ್ಳಿ ಗ್ರಾಮದಲ್ಲಿ ಈಜಲು ಹೋದ ತಂದೆ ಹಾಗೂ ಇಬ್ಬರು ಮಕ್ಕಳು ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಮಾಸ್ತಿ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

ಕೃಷಿ ಹೊಂಡ ದುರಂತ ಸಂಭವಿಸಿದ ಗ್ರಾಮಕ್ಕೆ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಭೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿ, ಪರಿಹಾರ ಘೋಷಣೆ ಮಾಡಿದ್ದಾರೆ.

ಜಿಲ್ಲೆಯ ಎಲ್ಲಾ ಅಸುರಕ್ಷಿತ ಕೃಷಿ ಹೊಂಡಗಳಿಗೆ ಮುಂದಿನ ಏಳು ದಿನಗಳ ಒಳಗಾಗಿ ಕಡ್ಡಾಯವಾಗಿ ತಂತಿ ಬೇಲಿ ಅಳವಡಿಸಬೇಕು. ಇಲ್ಲವಾದಲ್ಲಿ ಅಂತಹ ಹೊಂಡಗಳನ್ನು ಮುಚ್ಚಲು ಈಗಾಗಲೇ ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಹೊಂಡಗಳ ಬಳಿ ಕೇವಲ ಎಚ್ಚರಿಕೆ ಫಲಕ ಮಾತ್ರವಲ್ಲದೆ, ಆ ಹೊಂಡದ ಆಳ ಮತ್ತು ಅಗಲದ ನಿಖರ ಮಾಹಿತಿಯನ್ನು ಹೊಂದಿರುವ ಫಲಕಗಳನ್ನು ಅಳವಡಿಸಬೇಕು. ಇದರಿಂದ ನೀರಿನ ಆಳದ ಅರಿವಿಲ್ಲದೆ ಹೊಂಡಕ್ಕೆ ಇಳಿಯುವುದನ್ನು ತಪ್ಪಿಸಬಹುದು ಎಂದು ಸಲಹೆ ನೀಡಿದ್ದಾರೆ.

---

ಸಂವಿಧಾನದ ೧೨೯ನೇ ತಿದ್ದುಪಡಿ ಮಸೂದೆ, ೨೦೨೪ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನು ತಿದ್ದುಪಡಿ ಮಸೂದೆ, ೨೦೨೪ ಕುರಿತ ಜಂಟಿ ಸಂಸದೀಯ ಅಧ್ಯಯನ ಸಮಿತಿಯು ಇಂದು ಬೆಂಗಳೂರಿನಲ್ಲಿ 'ಒಂದು ರಾಷ್ಟ್ರ ಒಂದು ಚುನಾವಣೆ' ಕುರಿತು ಸಂವಾದ ಏರ್ಪಡಿಸಿತ್ತು.

ಸಮಿತಿ ಅಧ್ಯಕ್ಷರಾದ ಪಿ.ಪಿ ಚೌಧರಿ ಪದ್ಮಪ್ರಶಸ್ತಿ ಪುರಸ್ಕೃತರು ಹಾಗೂ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿ, 'ಒಂದು ರಾಷ್ಟ್ರ ಒಂದು ಚುನಾವಣೆ' ಕುರಿತು ಅಭಿಪ್ರಾಯ ಸಂಗ್ರಹಿಸಿದರು.

ಸಂವಾದದಲ್ಲಿ ಮಾತನಾಡಿದ ಸಮಿತಿ ಅಧ್ಯಕ್ಷರಾದ ಪಿ.ಪಿ.ಚೌಧರಿ ಕಾರ್ಮಿಕರು, ವಲಸಿಗರು ಸೇರಿದಂತೆ ದೇಶಾದ್ಯಂತ ಎಲ್ಲರಿಗೂ ಮತದಾನದ ಅವಕಾಶ ದೊರೆಯಬೇಕು ಎನ್ನುವುದು ಈ ಸಮಿತಿಯ ಉದ್ದೇಶ. ಹಾಗಾಗಿ ಚುನಾವಣೆಯನ್ನು ಒಮ್ಮೆ, ಹಲವು ಹಂತಗಳಲ್ಲಿ ನಡೆಸಿದಾಗ ಎಲ್ಲರಿಗೂ ಪ್ರಜಾಪ್ರಭುತ್ವದ ಹಬ್ಬದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ಬೆಂಗಳೂರು ಆಕಾಶವಾಣಿ ಕೇಂದ್ರದಲ್ಲಿ ಇಂದಿನಿಂದ ಇದೇ ೨೨ರವರೆಗೆ ನವದೆಹಲಿಯ ನ್ಯಾಷನಲ್ ಬ್ರಾಡ್‌ಕಾಸ್ಟಿಂಗ್ ಅಂಡ್ ಮಲ್ಟಿ ಮೀಡಿಯಾ ಸಂಸ್ಥೆ ಐದು ದಿನಗಳ ನೌಟೆಲ್ ಟ್ರಾನ್ಸ್‌ಮೀಟರ್ ಕುರಿತ ಕಾರ್ಯಾಗಾರ ಹಮ್ಮಿಕೊಂಡಿದೆ. ಕಾರ್ಯಕ್ರಮವನ್ನು ಭುವನೇಶ್ವರದ ಪ್ರಾದೇಶಿಕ ಬ್ರಾಡ್‌ಕಾಸ್ಟಿಂಗ್ ಅಂಡ್ ಮಲ್ಟಿಮೀಡಿಯಾ ಸಂಸ್ಥೆಯ ಉಪಮಹಾನಿರ್ದೇಶಕರಾದ ವಿ.ಎಂ.ರತ್ನಪ್ರಸಾದ್ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ಆಕಾಶವಾಣಿ ಕೇಂದ್ರದ ಉಪಮಹಾನಿರ್ದೇಶಕರಾದ ಸಂಜೀವ್.ಕೆ.ಪಿ ಉಪಸ್ಥಿತರಿದ್ದರು.

ಕಾರ್ಯಾಗಾರದಲ್ಲಿ ವಿವಿಧ ರಾಜ್ಯಗಳ ಆಕಾಶವಾಣಿ ಕೇಂದ್ರಗಳ ತಂತ್ರಜ್ಞರು ಮತ್ತು ಸಿಬ್ಬಂದಿ ಭಾಗವಹಿಸಿದ್ದಾರೆ. ನೌಟೆಲ್ ಟ್ರಾನ್ಸ್‌ಮೀಟರ್ ಕಾರ್ಯಾಚರಣೆ ಹಾಗೂ ನಿರ್ವಹಣೆ ಕುರಿತಂತೆ ತಾಂತ್ರಿಕ ತರಬೇತಿ ನೀಡುವುದು ಈ ಕಾರ್ಯಾಗಾರದ ಪ್ರಮುಖ ಉದ್ದೇಶವಾಗಿದೆ.

---

ಬೆಂಗಳೂರಿನ ವಿವಿಧೆಡೆ ಗುಡುಗು, ಗಾಳಿ ಸಹಿತ ಧಾರಾಕಾರ ಮಳೆಯಾಗಿದೆ.

ವಿಧಾನಸೌಧ, ನಾಗರಭಾವಿ, ಬಸವೇಶ್ವರ ನಗರ, ಬಸವನಗುಡಿ ಗಿರಿ ನಗರ ಸೇರಿದಂತೆ ಹಲವೆಡೆ ಭಾರೀ ಮಳೆ ಸುರಿದಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಕೆಲವು ಅಂಡರ್ ಪಾಸ್‌ಗಳಲ್ಲಿ ವಾಹನ ಸಂಚಾರ ನಿರ್ಬಂಧಿಸಲಾಗಿದ್ದು, ವಾಹನ ಸವಾರರು ಪರದಾಡುವಂತಾಗಿತ್ತು.

ಬೆಂಗಳೂರು ಮಾತ್ರವಲ್ಲದೆ, ರಾಜ್ಯದ ಹಲವೆಡೆ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರಾವಳಿ, ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡಿನ ಕೆಲಭಾಗಗಳಲ್ಲಿ ಮಳೆಯಾಗಲಿದ್ದು, ಗಾಳಿ, ಗುಡುಗು ಸಿಡಿಲು ಸಹಿತ ಮಳೆ ಸುರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

---

ಬಿಸಿಲಿನಿಂದ ತತ್ತರಿಸಿದ್ದ ಚಾಮರಾಜನಗರ ಜಿಲ್ಲೆಯ ಚಾಮರಾಜನಗರ, ಗುಂಡ್ಲುಪೇಟೆ ಹಾಗೂ ಹನೂರು ಭಾಗದಲ್ಲಿ ಒಂದು ತಾಸಿಗೂ ಅಧಿಕ ಕಾಲ ಜೋರು ಮಳೆಯಾಗಿದೆ.

ಗುಂಡ್ಲುಪೇಟೆ ತಾಲೂಕಿನಲ್ಲೂ ಉತ್ತಮ ಮಳೆಯಾಗಿದ್ದು ಹಿಮವದ್ ಗೋಪಾಲಸ್ವಾಮಿ ಬೆಟ್ಟದ ತಪ್ಪಲು, ಭೀಮನಬೀಡು, ದೇವರಹಳ್ಳಿ, ಗೋಪಾಲಪುರ, ಬೊಮ್ಮಲಾಪುರ ಬಾಚಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ವರುಣನ ಸಿಂಚನವಾಗಿದೆ.

ಬಂಡೀಪುರ ಕಾಡಂಚಿನ ಗ್ರಾಮಗಳಾದ ಹೊನ್ನೇಗೌಡನಹಳ್ಳಿ, ಗೋಪಾಲಪುರ, ದೇವರಹಳ್ಳಿ, ಹೊಂಗಹಳ್ಳಿ, ಬರಗಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ  ಈರುಳ್ಳಿ, ಬೆಳ್ಳುಳ್ಳಿ, ಟೊಮೋಟೊ, ಬೀನ್ಸ್ , ಸೂರ್ಯಕಾಂತಿ, ಹಲಸಂದೆ ಸೇರಿದಂತೆ ವಿವಿಧ ಫಸಲುಗಳಿದ್ದ ಜಮೀನಿಗೆ ನೀರು ನುಗ್ಗಿ ಬೆಳೆಗಳು ಕೊಚ್ಚಿ ಹೋಗಿದ್ದು, ರೈತರಿಗೆ ಅಪಾರ ನಷ್ಟವಾಗಿದೆ.

---

ಬಿಜೆಪಿ ಮತ್ತು ಜೆಡಿಎಸ್ ನಡುವೆ ಯಾವುದೇ ಬಿರುಕು ಇಲ್ಲ ಎಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ತಿಳಿಸಿದ್ದಾರೆ.

ತಮ್ಮ ೯೪ನೇ ಹುಟ್ಟುಹಬ್ಬದ ಸಂದರ್ಭದಲ್ಲಿ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡೂ ಪಕ್ಷಗಳ ನಡುವೆ ಪಾಲುದಾರಿಕೆ ದೃಢವಾಗಿ ಮುಂದುವರಿಯಲಿದೆ ಎಂದು ಹೇಳಿದ್ದಾರೆ.

ಜೆಡಿಎಸ್ ಕಾರ್ಯಕರ್ತರು ಶಿಸ್ತು ಬದ್ಧರಾಗಿ ಪಕ್ಷಕ್ಕೆ ಬದ್ಧರಾಗಿರುವಂತೆ ಕರೆ ನೀಡಿದ್ದಾರೆ.

---

ವಿಜಯನಗರ ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ನಾಯಿ ಕಡಿತ ಮತ್ತು ಹಾವು ಕಡಿತ ನಿರೋಧಕ ಲಸಿಕೆಗಳು ಕಡ್ಡಾಯವಾಗಿ ಲಭ್ಯವಿರಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಸೂಚನೆ ನೀಡಿದ್ದಾರೆ.

ಅಂತರ ಇಲಾಖೆ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಯಾವುದೇ ಕೇಂದ್ರದಲ್ಲಿ ಲಸಿಕೆ ಕೊರತೆಯಾಗಿ ಚಿಕಿತ್ಸೆ ವಿಳಂಬವಾದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಚ್ಚರಿಕೆ ನೀಡಿದ್ದಾರೆ.

---

ಪರಿಶಿಷ್ಟ ಜಾತಿಗೆ ಶೇಕಡಾ ೧೭ ಹಾಗೂ ಪರಿಶಿಷ್ಟ ಪಂಗಡಕ್ಕೆ ಶೇಕಡಾ ೭ ರ ಮೀಸಲಾತಿ ಬಿಕ್ಕಟ್ಟನ್ನು ಶೀಘ್ರವೇ ಪರಿಹರಿಸಿ ಎಂದು ಮಾಜಿ ಸಂಸದ ವಿ.ಎಸ್.ಉಗ್ರಪ್ಪ ಒತ್ತಾಯಿಸಿದ್ದಾರೆ.

ಚಾಮರಾಜನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಪರಿಶಿಷ್ಟರ ಮತ್ತು ಒಬಿಸಿ ಮೀಸಲಾತಿಯನ್ನು ಶೇಕಡಾ ೫೬ಕ್ಕೆ ಊರ್ಜಿತಗೊಳಿಸಲು ಕೇಂದ್ರ ಸರ್ಕಾರ ೯ನೇ ಪರಿಚ್ಛೇಧಕ್ಕೆ ಸೇರಿಸುವಂತೆ ಎಲ್ಲಾ ಪಕ್ಷಗಳ ನಾಯಕರು ಒತ್ತಡ ಹೇರುವಂತೆ ಆಗ್ರಹಿಸಿದ್ದಾರೆ.

---

ಇನ್ನು ಸಂಕ್ಷಿಪ್ತ ಸುದ್ದಿಗಳು...

೧. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಪೆಟ್ರೋಲ್, ಡೀಸೆಲ್, ತೈಲ ಬೆಲೆ ಏರಿಕೆ ಖಂಡಿಸಿ, ಹಾಗೂ ನೀಟ್ ಪರೀಕ್ಷಾ ಪ್ರಶ್ನೆ ಪತ್ರಿಕೆ ಸೋರಿಕೆ ಹಿನ್ನಲೆಯಲ್ಲಿ ಕೇಂದ್ರ ಶಿಕ್ಷಣ ಸಚಿವರ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

೨. ಗದಗ ಜಿಲ್ಲೆಯಲ್ಲಿ ಬೆಳೆಯುವ ದ್ವಿದಳಧಾನ್ಯಗಳಲ್ಲಿ ಮೌಲ್ಯವರ್ಧನೆ ಉತ್ತೇಜಿಸಲು ಹಾಗೂ ರೈತರ ಆದಾಯ ಹೆಚ್ಚಿಸುವ ಉದ್ದೇಶದಿಂದ ಅರ್ಹ ಫಲಾನುಭವಿಗಳಿಂದ ದ್ವಿದಳಧಾನ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ ೧೫ ಕೊನೆಯ ದಿನವಾಗಿದೆ.

__________ ಮುಕ್ತಾಯ ___________